(ಜಿ) ೧೯೮೭ರ ಕರ್ನಾಟಕ ವಿಧಾನ ಮಂಡಲದ ವೇತನ ನಿವೃತ್ತಿ ವೇತನ ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ೧೯೮೭ರ ಕರ್ನಾಟಕ ವಿಧಾನ ಮಂಡಲದ ವೇತನ, ನಿವೃತ್ತಿ ವೇತನ ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯಂ ವಂಂದೆ ಮಂಡಿಸಲು ತಮ್ಮ ಅನುಮತಿ ಕೋರಂತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ..೧೯೮೭ರ ಕರ್ನಾಟಕ ವಿಧಾನ ಮಂಡಲದ ವೇತನ, ನಿವೃತ್ತಿ ವೇತನ ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ ೧೯೮೭ರ ಕರ್ನಾಟಕ ವಿಧಾನ ಮಂಡಲದ ವೇತನ ನಿವೃತ್ತಿ ವೇತನ ಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ. *

೧೯೮೮ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎ ಲಕ್ಷ್ಮೀಸಾಗರ್ (ಕಾನೂನು ಮಂತ್ರಿಗಳು).—ಮಾನ್ಯ ಮುಖ್ಯಮಂತ್ರಿಗಳ ಪರವಾಗಿ, ಅಧ್ಯಕ್ಷರೇ ೧೯೮೮ನೇ ಇಸವಿಯ ಕರ್ನಾಟಕ ಮನರಂಜನಾ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾಪವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮಂತ್ರಿಗಳು).—ಸನ್ಮಾನ್ಯ ಅಧ್ಯಕ್ಷರೇ, ಈ ತಿದ್ದುಪಡಿ ವಿಧೇಯಕ ಒಹಳ ಸರಳವಾದುದು ಕನ್ನಡ ಭಾಷೆಯಲ್ಲಿ ತಯಾರಾಗತಕ್ಕಂತಹ ಚಲನಚಿತ್ರಗಳಿಗೆ ತೆರಿಗೆಯನ್ನು ಪಾವತಿ ಮಾಡುವುದರಲ್ಲಿ ಅನುಕೂಲಗಳನ್ನು ಮಾಡಿಕೊಟ್ಟಿದ್ದೇವೆ. ತೆರಿಗೆಯನ್ನು ಕಡಿಮೆ ಮಾಡತಕ್ಕ ಒಂದು ಪ್ರಸ್ತಾವನೆ ಇದು. ಇದನ್ನು ಆಧ್ಯಾದ್ವೇಶವಾಗಿ ಹೊರಡಿಸಲಾಗಿದೆ ಇದು ಕನ್ನಡ ಚಲನ ಚಿತ್ರ ಉದ್ಯಮಕ್ಕೆ ಸಹಾಯಕವಾದುದು. ಈ ತಿದ್ದುಪಡಿ ವಿಧೇಯಕದಲ್ಲಿ ಎಲ್ಲಾ ವಿವರಗಳನ್ನು ಕೊಡಲಾಗಿದೆ. ಮಾನ್ಯ ಸಭೆ ಇದಕ್ಕೆ ಸರ್ವಾನು ಮತದಿಂದ ಒಪ್ಪಿಗೆ ಕೊಡಬೇಕು ಎಂದು ಮನವಿ ಮಾಡುತ್ತೇನೆ.

† ಶ್ರೀ ಎಸ್. ಬಂಗಾರಪ್ಪ (ಸೊರಬ).—ಸನ್ಮಾನ್ಯ ಸಭಾಧ್ಯಕ್ಷರೇ, ಮಾನ್ಯ ಸಚಿವರು ಈ ಸದನದಲ್ಲಿ ಮಂಡಿಸಿರತಕ್ಕಂಥ ಈ ತಿದ್ದುಪಡಿ ಮಸೂದೆಯನ್ನು ಸ್ವಾಗತಿಸಿ ಈ ಬಗ್ಗೆ ಮಾತನಾಡುವುದಕ್ಕೆ ಇಷ್ಟಪಡುತ್ತೇನೆ. ಮಾನ್ಯ ಸಚಿವರು ವಿವರಗಳಿಗೆ ಹೋಗದಿದ್ದರೂ ಕೂಡ ಮುಖ್ಯವಾಗಿ ಹೇಳಿರತಕ್ಕಂಥನ್ನು ಕೆಲವು ರಿಯಾಯಿತಿಗಳ ಬಗ್ಗೆ ಈ ಷೋ ಟ್ಯಾಕ್ಸ್ ಏನು ಇದೆ, ಅದರಲ್ಲಿ ಮನರಂಜನಾ ತೆರಿಗೆಗೆ ಸಂಬಂಧಪಟ್ಟ ಹಾಗೆ ಕೆಲವು ರಿಯಾಯಿತಿಗಳನ್ನು ಕೊಟ್ಟಿದ್ದಾರೆ ಎನ್ನತಕ್ಕಂಥ ಮಾತು ನಿಜ.

---

* ANNEXURE